**ಡಾ. ಶಾಲಿನಿ ರಜನೀಶ್**, ಭಾ.ಆ.ಸೇ.,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖೆ

**ಕರ್ನಾಟಕ ಸರ್ಕಾರ**

ಕರ್ನಾಟಕ ಸರ್ಕಾರದ ಸಚಿವಾಲಯ
ಕೊಠಡಿ ಸಂಖ್ಯೆ: 701, 7ನೇ ಮಹಡಿ
3ನೇ ಹಂತ, ಬಹುಮಹಡಿಗಳ ಕಟ್ಟಡ
ಬೆಂಗಳೂರು – 560 001
ದೂ : 080–22252352, 22032726
ಇ–ಮೇಲ್: prsplanning@gmail.com

**ಅ.ಸ.ಪತ್ರ ಸಂ. ಆಸಾನಿ 30 ಜಮನೋ 2020** **ದಿನಾಂಕ: 24.06.2020**

**ವಿಷಯ:** ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ಪ್ರಮಾಣ ಪತ್ರಗಳ ವಿತರಣಾ ಅಧಿಕಾರಿಗಳನ್ನಾಗಿ ನೇಮಿಸುವ ಬಗ್ಗೆ.

**ಉಲ್ಲೇಖ:** ತಮ್ಮ ಕಛೇರಿ ಅ.ಸ.ಪತ್ರ ಸಂ.ಗ್ರಾಅಪಂರಾ ಪ್ರಕಾ ಆಶಾ 05 2020,ದಿನಾಂಕ: 06.06.2020

***

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಜನನ ಮತ್ತು ಮರಣ ನೋಂದಣಿ ಅಧಿನಿಯಮ 1969ರನ್ವಯ ಜನನ ಮತ್ತು ಮರಣ ಪ್ರಮಾಣ ಪತ್ರಗಳನ್ನು ಗ್ರಾಮ ಪಂಚಾಯಿತಿ ಹಂತದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರನ್ನು ಜನನ ಮರಣಗಳ ನೋಂದಣಿ ಮಾಡಲು ಆದೇಶ ಹೊರಡಿಸಲು ಕ್ರಮ ಕೈಗೊಳ್ಳುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತೀರಿ.

ಆದರೆ, ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಈ ಹಿಂದೆ ನಡೆಸಲಾಗಿರುವ ಸಭಾ ನಡವಳಿಗಳನ್ನು ಪರಿಶೀಲಿಸಲಾಗಿದ್ದು, ಗ್ರಾಮೀಣ ಪ್ರದೇಶದ ತಳ ಹಂತದಲ್ಲಿ ಗ್ರಾಮ ಲೆಕ್ಕಾಧಿಕಾರಿಗಳು ಜನನ–ಮರಣ ನೋಂದಣಾಧಿಕಾರಿಗಳಾಗಿದ್ದು, ಇ–ಜನ್ಮ ತಂತ್ರಾಂಶದಲ್ಲಿ ಜನನ, ಮರಣ ನೋಂದಣಿ ಮತ್ತು ಪ್ರಮಾಣ ಪತ್ರಗಳ ವಿತರಣಾ ಕಾರ್ಯವು ಜಾರಿಯಲ್ಲಿದೆ. ಆದ್ದರಿಂದ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು (ಪಿಡಿಒ) ಜನನ, ಮರಣ ಪ್ರಮಾಣ ಪತ್ರಗಳ ವಿತರಣಾ ಅಧಿಕಾರಿಯನ್ನಾಗಿ ನೇಮಿಸಬಹುದಾಗಿದೆ.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಚಾಲ್ತಿಯಲ್ಲಿರುವ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಜನನ, ಮರಣ ಪ್ರಮಾಣ ಪತ್ರಗಳ ವಿತರಣಾ ಕಾರ್ಯವನ್ನು ನಿರ್ವಹಿಸಲು ಬಾಪೂಜಿ ಸೇವಾ ಕೇಂದ್ರಕ್ಕೆ ಇ–ಜನ್ಮ ತಂತ್ರಾಂಶವನ್ನು ಸಂಯೋಜನೆ (Integrate) ಮಾಡಲಾಗುವುದು. ಸಾರ್ವಜನಿಕರಿಗೆ ಜನನ ಮರಣ ಪ್ರಮಾಣ ಪತ್ರಗಳು ಗ್ರಾಮ ಪಂಚಾಯಿತಿಯ ಮಟ್ಟದಲ್ಲಿಯೇ ಸುಲಭವಾಗಿ ಲಭ್ಯವಾಗುವ ಹಿತದೃಷ್ಟಿಯಿಂದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ಪ್ರಮಾಣ ಪತ್ರಗಳ ವಿತರಣಾ ಅಧಿಕಾರಿಗಳನ್ನಾಗಿ ನೇಮಿಸಲು ಅನುಮತಿ ನೀಡಲಾಗಿದ್ದು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವುದರಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ಪ್ರಮಾಣ ಪತ್ರ ವಿತರಣಾ ಅಧಿಕಾರಿಗಳನ್ನಾಗಿ ತಮ್ಮ ಹಂತದಲ್ಲಿ ನೇಮಿಸಿ ಆದೇಶ ಹೊರಡಿಸಿ ಪ್ರತಿಯನ್ನು ಈ ಕಛೇರಿಗೆ ಕಳುಹಿಸಲು ಕೋರಲಾಗಿದೆ.

ತಮ್ಮ ವಿಶ್ವಾಸಿ

ಉಮಾ ಮಹಾದೇವನ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂಚಾಯತ್ ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.